Members can attend and participate in the AGM through VC/OAVM facility only the details of which will be provided by the Company in the Notice of the Meeting Members participating through VC/OAVM facility shall be counted for the purpose of reckoning the quorum under Section 103 of the Companies Act, 2013. Members will have an opportunity to cast their vote remotely on the businesses as set out in the Notice of AGM through the e-voting system of NSDL. The instructions for joining the AGM and the manner of participation in the remote e-voting or casting vote through e-voting system during the AGM will be provided in the Notice of AGM. Members holding shares in dematerialized form, are requested to register/ update their email addresses with the Depository Participants with whom their demat accounts are maintained.

This notice is being issued for the information and benefit of all the Members of the Company and is in compliance with the applicable circulars of the MCA and SEBI.

For and on behalf of Capillary Technologies India Limited
Sd/-
Gireddy Bhargavi Reddy
Company Secretary and Compliance Officer

Place: Bangalore
Date: July 29, 2026

बैंक ऑफ़ बड़ौदा Bank of Baroda

Regional Office, Bengaluru Central, 5th Floor, 41/2, M G Road, Trinity Circle, Bengaluru – 560001

FOR THE KIND ATTENTION OF MOST VALUED CUSTOMERS

The following bank branch presently functioning at below mentioned address will be shifted to new address and shall function from the said new address shortly. It shall cater to all types of banking business from the said premises. Details as mentioned below.

NAME OF THE BANK/BRANCH	PRESENT ADDRESS	PROPOSED ADDRESS
Bank of Baroda Siddaiah Road Branch	**Bank of Baroda** 48/1(6), Jwalamukhi Complex, Near Lalbagh Road, H. Siddaiah Road, Bangalore-560002 Branch Head: **7483685651**	**Bank of Baroda** No. 102, Manandi Samvrudhi Building, Upper Ground floor, PID No 50-70-102, RV Road, BBMP Ward No. 143, V.V. Puram, Bangalore-560002. Branch Head : **7483685651**

We also wish to inform all the locker holder customers of our above mentioned branch that utmost care will be taken while shifting the locker to the proposed premises, However, in order to minimize the risk and loss during the shifting if any customer with locker facility desire to take possession of the contents before shifting and redeposit the same after shifting of the lockers to the proposed location, we request you to do so on or before shifting by contacting the concerned Branch Head.

We sincerely regret the inconvenience caused to you in this regard and assuring you of our best services at all times.

Date: 28.07.2026
Place: Bengaluru

Sd/- Regional Head,
Bank of Baroda, Bangalore Central

"IMPORTANT"

Whilst care is taken prior to acceptance of advertising copy, it is not possible to verify its contants. The Indian Express (P) Limited cannot be held responsible for such contents, nor for any loss or damage incurred as a result of transactions with companies, associations or individuals adversing in its newspapers or Publications. We therefore recommend that readers make necessary inquiries before sending any monies or entering into any agreements with advertisers or otherwise acting on an advertisement in any manner whatsoever.

---

pnb Housing Finance Limited

Regd: Off:- 9th Floor, Antriksh Bhawan, 22 K.G. Marg, New Delhi-110001. Ph.: 011-23357171, 23357172, 23705414, Web.: www.pnbhousing.com
Branch Office : Pranav Mansion, 1st Floor, 2nd cross, BH Road, CSI Layout Tumkur- 572101

NOTICE UNDER SECTION 13 (2) OF CHAPTER III OF SECURITISATION & RECONSTRUCTION OF FINANCIAL ASSETS AND ENFORCEMENT OF SECURITY INTEREST ACT 2002, READ WITH RULE 3(1) OF THE SECURITY INTEREST (ENFORCEMENT) RULES, 2002 AMENDED AS ON DATE

We, the PNB Housing Finance Ltd. (hereinafter referred to as "PNBHFL") had issued Demand notice U/s 13(2) of Chapter III of the Securitization & Reconstruction of Financial Assets and Enforcement of Security Interest Act, 2002 (hereinafter referred to as the "Act") By our Tumkur office Situated at Pranav Mansion, 1st Floor, 2nd cross, BH Road, CSI Layout Tumkur- 572101. The said Demand Notice was issued through our Authorized Officer, to you all below mentioned Borrowers/Co-Borrower/ Guarantors since your account has been classified as Non-Performing Assets as per the Reserve Bank of India/ National Housing Bank guidelines due to nonpayment of installments/ interest. The contents of the same are the defaults committed by you in the payment of installments of principals, interest, etc. The outstanding amount is mentioned below. Further, with reasons, we believe that you are evading the service of Demand Notice and hence this Publication of Demand Notice which is also required U/s 13(2) of the said Act. You are hereby called upon to pay PNBHFL within a period of 60 Days of the date of publication of this demand notice the aforesaid amount along with up-to-date interest and charges, failing which PNBHFL will take necessary action under all or any of the provisions of Section 13(4) of the said Act, against all or any one or more of the secured assets including taking possession of the secured assets of the borrowers and guarantors. Your kind attention is invited to provisions of sub-Section (8) of Section13 of the of the Securitization and Reconstruction of Financial Assets and Enforcement of Security Interest Act, 2002 where under you can tender/pay the entire amount of outstanding dues together with all costs, charges and expenses incurred by the PNB HFL only till the date of publication of the notice for sale of the secured assets by public auction, by inviting quotations, tender from public or by private treaty. Please also note that if the entire amount of outstanding dues together with the costs, charges and expenses incurred by the PNB HFL is not tendered before publication of notice for sale of the secured assets by public auction, by inviting quotations, tender from public or by private treaty, you may not be entitled to redeem the secured asset(s) thereafter. **FURTHER you are prohibited U/s 13(13) of the said Act from transferring either by way of sale, lease or in any other way the aforesaid secured assets.**

Loan Account Number(s)	Name of Borrower/Co-Borrower	Name & Address of Guarantor(s)	Property(ies) Mortgaged	Date of Demand Notice	Amount O/s as on date Demand Notice
NHL/ BAN/ 0317/ 363114 B.O.: Tumkur	**Borrower: Mr./Ms. K Girish**, 8TH Cross, Sapthagiri Badavane, Somesswarapuram Madhugiri, Karnataka,India, 572102/ Sri Lakshmi Venkareshwara Timber And Furniture, Geddlahali Main Road,Sapthagiri Circle, Upparahalli ,Karnataka India, 572103/Plot No 30, Sapthagiri Extension, Gedalahalli, Site No 30, Bangalore East, Bangalore, Karnataka, 560040/ **Co-Borrower: Mr./Ms. Rathnamma Rathnamma**, 8TH Cross, Sapthagiri Badavane, Somesswarapuram Madhugiri, Karnataka, India, 572102/ Plot No 30, Sapthagiri Extension, Gedalahalli, Site No 30, Bangalore East, Bangalore, Karnataka, 560040,	NA	Plot No 30. Sapthagiri Extension, Gedalahalli, Site No 30, Bangalore East, Bangalore, Karnataka, 560040	14th Jul 2026	**Rs.31,88,760.06** (Rupees Thirty One Lakhs Eighty Eight Thousand Seven Hundred Sixty And Six Paisa Only)

PLACE : Bangalore | DATE : 29.07.2026
SD/- AUTHORIZED OFFICER, PNB HOUSING FINANCE LIMITED

ನಗರದ 2 ಕಡೆ ಇ.ಡಿ ದಾಳಿ

ಬೆಂಗಳೂರು: ಕೋಟ್ಯಂತರ ರು. ಮೌಲ್ಯದ ಮಾದಕ ವಸ್ತು ಮಾರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ಎರಡು ಕಡೆ ಇ.ಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಹೈದರಾಬಾದ್ ಎನ್‌ಡಿಪಿಎಸ್ ಪ್ರಕರಣದಲ್ಲಿ ಇ.ಡಿ ಅಧಿಕಾರಿಗಳು ದಾಳಿ ನಡೆಸಿದ್ದು, ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ. ಹೈದ ರಾಬಾದ್‌ನಲ್ಲಿ 7 ಕಡೆ ದಾಳಿ ನಡೆಸಲಾಗಿದೆ. ಇತ್ತೀಚೆಗೆ ಹೈದ್ರಾಬಾದ್ ಪೊಲೀಸರು ಈ ಪ್ರಕರಣದ ಆರೋಪಿ ಗಳನ್ನು ಬಂಧಿಸಿದ್ದರು. ಇತ್ತೀಚೆಗೆ ಥೈಲ್ಯಾಂಡ್‌ನಿಂದ ಹೈದರಾಬಾದ್ ವಿಮಾನ ನಿಲ್ದಾಣದ ಮೂಲಕ ವ್ಯಾಕ್ಯೂಮ್-ಸೀಲ್ಡ್ ಪ್ಯಾಕೇಜ್‌ಗಳಲ್ಲಿ ಭಾರತಕ್ಕೆ ಅಕ್ರಮವಾಗಿ 1,500 ಕೋಟಿ ರು. ಮೌಲ್ಯದ ಹೈಡ್ರೋಪೋನಿಕ್ ಗಾಂಜಾ ಸಾಗಿಸುತ್ತಿರುವುದು ಪತ್ತೆಯಾಗಿತ್ತು. ಈ ಸಂಬಂಧ ಇ.ಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದೆ. ಈ ಮಾದಕವಸ್ತು ಜಾಲದ ಮೂಲಕ ಗಳಿಸಲಾದ ಕೋಟ್ಯಂತರ ರು. ಅಕ್ರಮ ಹಣದ ವರ್ಗಾವಣೆಯ ಲಿಂಕ್‌ಗಳನ್ನು ಪತ್ತೆಹಚ್ಚಲು ಇ.ಡಿ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದ್ದಾರೆ.

ದೋಸೆ, ರಾಗಿ ಮುದ್ದೆ ಮಾಡುವಂತೆ ಅತ್ತೆ ಕೇಳುವುದು ಕ್ರೌರ್ಯವೇ?: ಹೈಕೋರ್ಟ್ ಪ್ರಶ್ನೆ

ಅತ್ತೆ ವಿರುದ್ಧ ವಾದ ಮಂಡಿಸಿದ ಸೊಸೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ದೋಸೆ ಮತ್ತು ರಾಗಿ ಮುದ್ದೆ ಮಾಡುವಂತೆ ಅತ್ತೆ ಕೇಳುವುದು ಹಾಗೂ ನಿಮ್ಮ (ಪತ್ನಿ) ತಲೆ ಕೂದಲು ಉದುರುವುದು ಕೌಟುಂಬಿಕ ದೌರ್ಜನ್ಯವಾಗುತ್ತದೆಯೇ? ಎಂದು ಹೈಕೋರ್ಟ್ ಮಂಗಳವಾರ ಮೌಖಿಕವಾಗಿ ಪ್ರಶ್ನಿಸಿದೆ.

ಸೊಸೆ ನೀಡಿರುವ ದೂರಿನ ಅನ್ವಯ ದಾಖಲಾಗಿರುವ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಅತ್ತೆ ಮತ್ತು ಆಕೆಯ ಸಂಬಂಧಿಗಳು ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು. ವಿಚಾರಣೆಯ ವೇಳೆ ಪೀಠವು ಉಸಿರುಗಟ್ಟಿಸುವ ಅತ್ತೆ, ಮಾನಸಿಕ ಮತ್ತು ದೈಹಿಕ ಹಿಂಸೆ ನೀಡಿದ್ದಾರೆ ಎಂದು ದೂರಿನಲ್ಲಿ ಹೇಳಿದ್ದೀರಿ. ಪತಿ ಊಟ ಮಾಡುವವರೆಗೆ ನನ್ನನ್ನು ಊಟ ಮಾಡಲು ಬಿಡುತ್ತಿರಲಿಲ್ಲ. ಪತಿಗೆ ಬಿಸಿ ದೋಸೆ, ಪತಿ ಬೆಳಗ್ಗೆ 10 ಗಂಟೆಗೆ ತಿಂಡಿ ತಿಂದ ಬಳಿಕ ನಾನು ತಿಂಡಿ ತಿನ್ನಬೇಕಿತ್ತು ಎಂದು ಹೇಳಿದ್ದೀರಿ. ಇದನ್ನು ಆಧರಿಸಿ ಐಪಿಸಿ ಸೆಕ್ಷನ್ 498ಎ ಅನ್ವಯಿಸಬಹುದೇ? ಏನು ಮೇಡಂ ಇದು.. ಎಂದು ಪ್ರಶ್ನಿಸಿದೆ.

ಕುಟುಂಬದಲ್ಲಿ ಜಗಳಗಳು ನಡೆಯುವುದಿಲ್ಲವೇ? ಪತಿಗೆ ರಾಗಿ ಮುದ್ದೆ ಮಾಡಿಕೊಡಿ ಎಂದು ಅತ್ತೆ ಹೇಳುವುದು ತಪ್ಪೇ? ತಲೆಕೂದಲು ಉದುರಿದ್ದಕ್ಕೆ ಐಪಿಸಿ ಸೆಕ್ಷನ್ 498ಎ? ನಿಮಗೆ ತಲೆ ಕೂದಲು ಉದುರುವುದು, ಪತಿಗೆ ದೋಸೆ, ರಾಗಿ ಮುದ್ದೆ ಮಾಡಿಕೊಡಿ ಎಂದು ಹೇಳುವುದು, ನಿಮಗೆ ಪೌಷ್ಟಿಕಾಂಶಯುಕ್ತ ಆಹಾರ ನೀಡಿಲ್ಲ ಎಂಬುದು ವರದಕ್ಷಿಣೆ ಕಿರುಕುಳವೇ? ಈ ಎಲ್ಲಾ ಆರೋಪಗಳನ್ನು ವಿಚ್ಛೇದನ ಕೋರಿಕೆ ವಿಚಾರಣೆಯಲ್ಲಿ ಪ್ರಸ್ತಾಪಿಸಬಹುದು. ಕೆಲವೊಂದು ಆರೋಪಗಳನ್ನು ಕ್ರೌರ್ಯಕ್ಕೆ ಸಮನಾಗಿಸಲು ಸಾಧ್ಯವಿಲ್ಲ. ಎಷ್ಟು ದಿನ ಗಂಡನ ಮನೆಯಲ್ಲಿದ್ದಿರಿ? ದೂರುದಾರೆಯ ದೃಷ್ಟಿಯಲ್ಲಿನ ಕ್ರೌರ್ಯವು ಕ್ರೌರ್ಯವಲ್ಲ. ಕಾನೂನಿನ ಅಡಿ ಕ್ರೌರ್ಯ ಮಾತ್ರ ಕ್ರೌರ್ಯ. ಎಲ್ಲಾ ಅಹವಾಲುಗಳನ್ನು ಕ್ರೌರ್ಯಕ್ಕೆ ಹೋಲಿಕೆ ಮಾಡಲಾಗದು. ನೀವಿಬ್ಬರೂ ಪರಸ್ಪರ ದೂರು-ಪ್ರತಿದೂರು ದಾಖಲಿಸುವುದು ಕ್ರೌರ್ಯವಲ್ಲ. ಈ ಪ್ರಕರಣದಲ್ಲಿ ಪತಿಯನ್ನು ಕ್ಷಮಿಸುವುದಿಲ್ಲ ಎಂದಿತು.

ಪ್ರತಿವಾದಿಯಾಗಿರುವ ಪತ್ನಿ ಸ್ವತಃ ತಾವೇ ನ್ಯಾಯಾಲಯದ ಮುಂದೆ ಹಾಜರಾಗಿ ವಾದಿಸಿದರು. ಪತಿಯ ಮನೆಯ ಕಡೆಯವರು ಮಾನಸಿಕ ಮತ್ತು ದೈಹಿಕ ಹಿಂಸೆ ನೀಡಿದ್ದಾರೆ. ಇಲ್ಲಸಲ್ಲದ ಆರೋಪ ಮಾಡಿದ್ದಾರೆ. ನನಗೆ ಪೌಷ್ಟಿಕಾಂಶಯುಕ್ತ ಆಹಾರವನ್ನು ನೀಡಿಲ್ಲ. ಪ್ರತಿದಿನ ದೋಸೆ, ಅನ್ನ, ಸೊಪ್ಪು ಮತ್ತು ಬೇಳೆ ಸಾರು ನೀಡುತ್ತಿದ್ದರು. ಆದರೆ, ಅವರು ಮಾತ್ರ ದಿನ ಪೌಷ್ಟಿಕಾಂಶಯುಕ್ತ ಆಹಾರ ಸೇವಿಸುತ್ತಿದ್ದರು. ನನ್ನ ಮೇಲಿನ ದೌರ್ಜನ್ಯದಿಂದಾಗಿ ನನಗೆ ತಲೆಕೂದಲು ಉದುರಿದೆ. ಅಡುಗೆ ಮನೆಗೆ ಹೋಗಲು ಅತ್ತೆ ನನ್ನನ್ನು ಬಿಡುತ್ತಿರಲಿಲ್ಲ. ನನಗೆ ಬರುತ್ತಿದ್ದ ಸಂಬಳವನ್ನೆಲ್ಲಾ ಪತಿಗೆ ನೀಡುತ್ತಿದ್ದು, ಖರ್ಚಿಗೆ ಏನೂ ಉಳಿಯುತ್ತಿರಲಿಲ್ಲ. ಪತಿಯನ್ನು ತನ್ನ ಕೊಠಡಿಯಲ್ಲಿಯೇ ಮಲಗುವಂತೆ ಅತ್ತೆ ಮಾಡಿದ್ದಳು. ನಾನು ನನ್ನ ಕೊಠಡಿಯಲ್ಲಿ ಏಕಾಂಗಿಯಾಗಿದ್ದೆ. ಐದೂವರೆ ತಿಂಗಳು ಈ ದುರಂತಮಯ ಬದುಕು ಅನುಭವಿಸಿ, ಪತಿಯ ಮನೆಯಿಂದ ಹೊರಬೀಳಬೇಕಾಯಿತು ಎಂದರು.

ಟಾಕ್ಸಿಕ್ ಅತ್ತೆ ಎಂದ ಸೊಸೆ

ನನ್ನ ತಾಯಿಯ ಮನೆ ಬಳಿ ಬಂದು ರಸ್ತೆಯಲ್ಲಿ ನಿಂತು ಅವಾಚ್ಯ ಶಬ್ದಗಳಿಂದ ಅರ್ಜಿದಾರರು ನಿಂದಿಸಿದ್ದಾರೆ. ನನ್ನ ಘನತೆ ಪ್ರಶ್ನಿಸಿ ದ್ದಾರೆ. ಬೇರೊಬ್ಬನ ಜತೆ ಓಡಿಹೋಗಿದ್ದಾಳೆ ಎಂದು ನಿಂದಿಸಿದ್ದಾರೆ. ಇದರಿಂದ ನೆರೆಹೊರೆಯವರು ನನ್ನನ್ನು ಏನೆಂದು ಕೊಳ್ಳ ಬೇಡ. ಹೀಗಾಗಿ, ಅವರ ವಿರುದ್ಧ ಮಾನಹಾನಿ ಪ್ರಕರಣವನ್ನೂ ದಾಖಲಿಸಿದ್ದೇನೆ ಎಂದರು. ಅರ್ಜಿದಾರರ ಪರವಾಗಿ ಹಾಜರಾ ಗಿದ್ದ ವಕೀಲರು ಅತ್ತೆ ಮತ್ತು ಆಕೆಯ ಇಬ್ಬರು ಸಹೋದರರು ಮತ್ತು ಪತಿಯ ಸ್ನೇಹಿತನ ವಿರುದ್ಧ ಪತ್ನಿ ದಾಖಲಿಸಿರುವ ಪ್ರಕರಣ ರದ್ದುಪಡಿಸುವಂತೆ ಕೋರಲಾಗಿದೆ. ಪ್ರಕರಣ ರದ್ದತಿ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಪತಿ ಈಗಾಗಲೇ ಹಿಂಪಡೆದಿದ್ದಾರೆ. ತಮ್ಮ ದೂರಿನಲ್ಲಿ ಅತ್ತೆಯನ್ನು ಟಾಕ್ಸಿಕ್ ಅತ್ತೆ ಎಂದು ಸೊಸೆ ಉಲ್ಲೇಖಿಸಿದ್ದಾರೆ. ಎಲ್ಲರ ವಾದ ಆಲಿಸಿದ ಪೀಠವು ಆದೇಶ ಕಾಯ್ದಿರಿಸಿತು.

ಐಷಾರಾಮಿ ಕಾರುಗಳಿಗೆ ನಕಲಿ ದಾಖಲೆ ಸೃಷ್ಟಿಸಿ ವಂಚನೆ: ಸೆರೆ

ಬೆಂಗಳೂರು: ಐಷಾರಾಮಿ ಕಾರುಗಳಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಸರಣಿ ವಂಚನೆ ಎಸಗುತ್ತಿದ್ದ ಭಾರಿ ಜಾಲವನ್ನು ಆಡುಗೋಡಿ ಠಾಣೆ ಪೊಲೀಸರು ಭೇದಿಸಿದ್ದಾರೆ.

ಕಾರ್ಯಾಚರಣೆ ನಡೆಸಿದ ಪೊಲೀಸರು ನಾಲ್ವರು ಖತರ್ನಾಕ್ ಆರೋಪಿಗಳನ್ನು ಬಂಧಿಸಿದ್ದು, ಅವರಿಂದ 1.74 ಕೋಟಿ ರುಪಾಯಿ ಮೌಲ್ಯದ 7 ಐಷಾರಾಮಿ ಕಾರುಗಳನ್ನು ವಶಪಡಿಸಿಕೊಂಡಿದ್ದಾರೆ. ಪ್ರಭಾಕರ್, ಪ್ರಶಾಂತ್, ವೇಣುಗೌಡ ಹಾಗೂ ಭಾಗೇಶ್ ಬಂಧಿತ ಆರೋಪಿಗಳು. ಇವರಿಂದ 2 ಫಾರ್ಚೂನರ್, 1 ವೋಲ್ವೋ, 1 ಇನ್ನೋವಾ, ಫೋರ್ಡ್ ಹಾಗೂ ಸ್ವಿಫ್ಟ್ ಸೇರಿದಂತೆ ಒಟ್ಟು 7 ಕಾರುಗಳನ್ನು ಜಪ್ತಿ ಮಾಡಲಾಗಿದೆ.

ವಂಚನೆಯ ಜಾಲ ಹೇಗಿತ್ತು?: ಬಂಧಿತ ಆರೋಪಿಗಳು ಕಾರು ಬ್ರೋಕರ್ ಕೆಲಸದ ನೆಪದಲ್ಲಿ ವಂಚನೆಗೆ ಇಳಿಯುತ್ತಿದ್ದರು. 40 ರಿಂದ 50 ಲಕ್ಷ ರು. ಮೌಲ್ಯದ ಕಾರುಗಳನ್ನು ಅಡವಿಟ್ಟು 4-5 ಲಕ್ಷ ರುಪಾಯಿ ಸಾಲ ಪಡೆಯುವ ಆಟೋಮೊಬೈಲ್ ಮಾಲೀಕರನ್ನು ಈ ಜಾಲ ಟಾರ್ಗೆಟ್ ಮಾಡುತ್ತಿತ್ತು. ಮಾಲೀಕರು ಕಾರು ಅಡಮಾನವಿಟ್ಟ ತಕ್ಷಣ, ಆ ಕಾರುಗಳಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸುತ್ತಿದ್ದರು ಅಥವಾ ಒರಿಜಿನಲ್ ಆರ್‌ಸಿ ಕಾರ್ಡ್ ಟ್ಯಾಂಪರ್ ಮಾಡಿ ಹೆಸರು ಬದಲಾಯಿಸುತ್ತಿದ್ದರು.

ಬಳಿಕ, ಹೆಸರು ಬದಲಾಯಿಸಿದ ನಕಲಿ ದಾಖಲೆಗಳೊಂದಿಗೆ ಮತ್ತೊಬ್ಬ ಡೀಲರ್ ಬಳಿ ಹೋಗಿ, 4 ರಿಂದ 5 ಲಕ್ಷಕ್ಕೆ ಅಡಮಾನವಿದ್ದ ಕಾರನ್ನು 20 ರಿಂದ 25 ಲಕ್ಷ ರು.ಗೆ ಮತ್ತೆ ಅಡ ಇಡುತ್ತಿದ್ದರು. ಬಂದ ಹಣದಲ್ಲಿ ಮೂಲ ಮಾಲೀಕರಿಗೆ 4 ರಿಂದ 5 ಲಕ್ಷ ನೀಡಿ ಕಾರು ಬಿಡಿಸಿಕೊಂಡು, ಅದನ್ನು ಮತ್ತೆ ಬೇರೊಬ್ಬರಿಗೆ ಅಡಮಾನವಿಡುತ್ತಿದ್ದರು. ಹೀಗೆ ಸರಣಿಯಾಗಿ ಹಲವರಿಗೆ ಅಡಮಾನವಿಟ್ಟು ಲಕ್ಷಾಂತರ ರೂಪಾಯಿ ವಂಚಿಸುತ್ತಿದ್ದರು.

ಪೊಲೀಸರಿಗೆ ಸವಾಲಾದ ಮೂಲ ಮಾಲೀಕರು

ಆರೋಪಿಗಳು ಸೃಷ್ಟಿಸಿದ್ದ ನಕಲಿ ದಾಖಲೆಗಳು ಮತ್ತು ಸರಣಿ ಅಡಮಾನ ಪ್ರಕ್ರಿಯೆಯಿಂದಾಗಿ, ಜಪ್ತಿಯಾಗಿರುವ ಕಾರುಗಳ ನಿಜವಾದ ಮೂಲ ಮಾಲೀಕರು ಯಾರು ಎಂಬುದನ್ನು ಪತ್ತೆ ಹಚ್ಚುವುದೇ ಪೊಲೀಸರಿಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ತಮ್ಮ ಕಾರನ್ನು ಪಡೆದು ವಾಪಸ್ ನೀಡದೆ ವಂಚಿಸಲಾಗಿದೆ ಎಂದು ಸಾರ್ವಜನಿಕರು ನೀಡಿದ ದೂರಿನನ್ವಯ ಕಾರ್ಯಪ್ರವೃತ್ತರಾದ ಆಡುಗೋಡಿ ಪೊಲೀಸರು ಆರೋಪಿಗಳನ್ನು ಹೆಡೆಮುರಿ ಕಟ್ಟಿದ್ದಾರೆ. ಸದ್ಯ ಬಂಧಿತರನ್ನು ತೀವ್ರ ವಿಚಾರಣೆಗೆ ಒಳಪಡಿಸಲಾಗಿದ್ದು, ಈ ಜಾಲದಲ್ಲಿ ಇನ್ನಷ್ಟು ಮಂದಿ ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ.

IN THE COURT OF THE ADDITIONAL DISTRICT JUDGE OF UDHAGAMANADALAM, THE NILGIRIS.
O.S. No. 105/2025
MARCUS FREDERICK LAZARO
...PETITIONER/PLAINTIFF
Vs
S.PRADEEP And 27 Others.
...RESPONDENTS/DEFENDANTS
NOTICE
Ms. Shwetha Ramesh, D/o. Sanjeev Walaiya, No. 207, Adarsh Palam Meadows, Airport Whitefield Road, Bangalore-506 066 Karnataka.
Please take notice that the petitioner/plaintiff has filed a suit for declaration of sale deed and recovery of possession and I.A.No 1 & 3/25 in the above case and the same is stands posted for your appearance and objection if any on 14/8/26 at 10.30.a.m., failing which it will be determine EXPARTE.
K.Jayaraman, A.Nirmala Selvi
ADVOCATES
Ootacamund, The Nilgiris

ಮಾನ್ಯ ಗೌರವಾನ್ವಿತ ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಜೆ.ಎಂ.ಎಫ್‌ಸಿ ನ್ಯಾಯಾಲಯ ಕನಕಪುರ
ಸಿ.ಮಿಸ್ ನಂ. 249 /2026
ಅರ್ಜಿದಾರರು: ಶ್ರೀಮತಿ ಚೆನ್ನಮ್ಮ ತ್ರಿ/ಓ ಲಿಂಗೇಗೌಡ ವಯಸ್ಸು 57 ವರ್ಷ ವಾಸ, ನಂ.47 ತೋಕತಿಮ್ಮನದೊಡ್ಡಿ ಗ್ರಾಮ, ಕಗ್ಗಲಹಳ್ಳಿ ಅಂಚೆ, ಹಾರೋಹಳ್ಳಿ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ. ಮತ್ತು ಮತ್ತಿತರರು
V/S
ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೋಂದಣಾಧಿಕಾರಿಗಳು, ತಹಶೀಲ್ದಾರ್ ಹಾರೋಹಳ್ಳಿ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ(ರಾಮನಗರ) ಗ್ರಾಮ ಲೆಕ್ಕಾಧಿಕಾರಿಗಳು, ಕಗ್ಗಲಹಳ್ಳಿ ವೃತ್ತ ಹಾರೋಹಳ್ಳಿ ಹೋಬಳಿ, ಬೆಂಗಳೂರು ದಕ್ಷಿಣ ಜಿಲ್ಲೆ. (ರಾಮನಗರ)
ಪ್ರಕಟಣೆ
ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಮೇಲ್ಕಂಡ ಅರ್ಜಿದಾರರ ತಮ್ಮ ಶಿವಣ್ಣ ಬಿ/ಓ ಲಿಂಗೇಗೌಡ 04/03/2001 ರಂದು ತೋಕತಿಮ್ಮನದೊಡ್ಡಿ ಗ್ರಾಮ, ಕಗ್ಗಲಹಳ್ಳಿ ಅಂಚೆ, ಹಾರೋಹಳ್ಳಿ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ 562112. ಇಲ್ಲಿ ನಿಧನರಾಗಿರುತ್ತಾರೆ. ಇವರ ಮರಣದ ಬಗ್ಗೆ ಯಾವುದೇ ಅಧಿಕೃತ ದಾಖಲೆಗಳು ಇಲ್ಲದ ಸಲುವಾಗಿ ಮೇಲ್ಕಂಡ ಅರ್ಜಿಯನ್ನು ಜನನ ಮತ್ತು ಮರಣ ನೋಂದಣಿ ಕಾಯ್ದೆ 1969 ರಂತೆ ದೃಢೀಕರಣ ಪತ್ರವನ್ನು ಪಡೆಯಲು ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ-ಎಂಎಫ್‌ಸಿ ಕನಕಪುರ ಇಲ್ಲಿ ಅರ್ಜಿಯನ್ನು ಸಲ್ಲಿಸಿದ್ದು, ಇದಕ್ಕೆ ಸಂಬಂಧಪಟ್ಟಂತೆ ಯಾರಾದರೂ ಇದ್ದಲ್ಲಿ ಖುದ್ದಾಗಿ ಆಗಲಿ ಅಥವಾ ತಮ್ಮ ವಕೀಲರ ಮುಖಾಂತರ ವಾಗಲಿ ದಿನಾಂಕ: 15/09/2026 ರಂದು 11:00 ಬೆಳಿಗ್ಗೆ ಮೇಲ್ಕಂಡ ನ್ಯಾಯಾಲಯದಲ್ಲಿ ಹಾಜರಾಗತಕ್ಕದ್ದು, ಇಲ್ಲವಾದಲ್ಲಿ ಅರ್ಜಿಯನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮೊಹರಿನೊಂದಿಗೆ ನೊಂದಣಿಗೆ ಹಾಗೂ ನನ್ನ ಸಹಿಯೊಡನೆ ದಿನಾಂಕ : 23ನೇ ಜುಲೈ 2026 ರಂದು ನೀಡಲಾಗಿದೆ.
ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.ನ್ಯಾಯಾಲಯ ಕನಕಪುರ
ಅರ್ಜಿದಾರರ ಪರ ವಕೀಲರು
ಅಭಿಷೇಕ್‌ಗೌಡ ಜಿ.ಎಸ್, ವಕೀಲರು ಕನಕಪುರ.
ದಿನಾಂಕ: 23/07/2026, ಕನಕಪುರ

ಕೋರ್ಟ್ ಕಾಗ್ನಿಜೆನ್ಸ್‌ಮೇಲೆ ಆರೋಪಿಗೆ ಸಮನ್ಸ್ | ಆ.24ಕ್ಕೆ ವಿಚಾರಣೆಗೆ ಬರಲು ಸೂಚನೆ

ಮಾನನಷ್ಟ ಮೊಕದ್ದಮೆ ಪ್ರಕರಣದಲ್ಲಿ ಜನಾರ್ದನ ರೆಡ್ಡಿಗೆ ಸಮನ್ಸ್ ಜಾರಿ



ಬೆಂಗಳೂರು: ಶಾಸಕ ಜನಾರ್ದನ ರೆಡ್ಡಿಗೆ ಮಾನನಷ್ಟ ಮೊಕದ್ದಮೆ ಪ್ರಕರಣದಲ್ಲಿ ನ್ಯಾಯಾಲಯ ಜನಾರ್ದನ ಸಮನ್ಸ್ ಜಾರಿ ಮಾಡಿದೆ.

ತಮಿಳುನಾಡು ಸಂಸದ ಸಸಿಕಾಂತ್ ಸೆಂಥಿಲ್ ನೀಡಿದ್ದ ಮಾನನಷ್ಟ ಪ್ರಕರಣದಲ್ಲಿ ಸಮನ್ಸ್ ಜಾರಿಯಾಗಿದೆ. ಪ್ರಕರಣ ಸಂಬಂಧ ಕಾಗ್ನಿಜೆನ್ಸ್ ತೆಗೆದುಕೊಂಡ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಕ್ರಿಮಿನಲ್ ಕೇಸ್ ದಾಖಲಿಸಿಕೊಂಡು ಸಮನ್ಸ್ ಜಾರಿಗೊಳಿಸಿದೆ. ನ್ಯಾ.ಸಂದೀಪ್ ಪಾಟೀಲ್ ಅವರ ಪೀಠದಿಂದ ಸಮನ್ಸ್ ಜಾರಿಯಾಗಿದ್ದು, ಧರ್ಮಸ್ಥಳ ವಿರುದ್ಧದ ಷಡ್ಯಂತ್ರದ ಹಿಂದೆ ಸೆಸಿಕಾಂತ್ ಸೆಂಥಿಲ್ ಇದ್ದಾರೆ ಎಂಬ ಆರೋಪ ಮಾಡಲಾಗಿತ್ತು. ಚಿನ್ನಯ್ಯನಿಗೆ ಆಶ್ರಯ ಸೇರಿ ಷಡ್ಯಂತ್ರದ ಭಾಗ ಆಗಿದ್ದರೆಂಬ ಜನಾರ್ದನ ರೆಡ್ಡಿ ಆರೋಪ ಮಾಡಿದ್ದರು. ಈ ವಿಚಾರಕ್ಕಾಗಿ ಜನಾರ್ದನ ರೆಡ್ಡಿ ವಿರುದ್ಧ ಮಾನನಷ್ಟ ಕೇಸ್ ದಾಖಲಿಸಿದ್ದ ಸೆಂಥಿಲ್ ಕಾನೂನು ಹೋರಾಟ ಮುಂದುವರಿಸಿದ್ದರು. ವಿಚಾರಣೆ ನಡೆಸಿದ ಕೋರ್ಟ್ ಕಾಗ್ನಿಜೆನ್ಸ್ ತೆಗೆದುಕೊಂಡು ಆರೋಪಿಗೆ ಸಮನ್ಸ್ ನೀಡಿ ಆಗಸ್ಟ್ 24ಕ್ಕೆ ಖುದ್ದು ಹಾಜರಾಗುವಂತೆ ಸೂಚಿಸಿದೆ.

ರೆಡ್ಡಿ-ಸೆಂಥಿಲ್ ಆರೋಪ ಪ್ರತ್ಯಾರೋಪ ಧರ್ಮಸ್ಥಳದ ವಿರುದ್ಧ ನಡೆದಿರುವ ಷಡ್ಯಂತ್ರದ ಹಿಂದಿನ ಮಾಸ್ಟರ್ ಮೈಂಡ್ ಸಸಿಕಾಂತ್ ಸೆಂಥಿಲ್ ಅವರಾಗಿದ್ದಾರೆ ಎಂದು ಕಳೆದ ವರ್ಷ ಆಗಸ್ಟ್‌ನಲ್ಲಿ ಜನಾರ್ದನ ರೆಡ್ಡಿ ಅವರು ಆರೋಪಿಸಿ, ತನಿಖೆ ಎದುರಿಸುವಂತೆ ಸವಾಲೆಸೆದಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ್ದ ಸೆಂಥಿಲ್, ಜನಾರ್ದನ ರೆಡ್ಡಿ ಅವರು ರಾಜಕೀಯ ದುರುದ್ದೇಶದಿಂದ ನನ್ನ ವಿರುದ್ಧ ಆಧಾರರಹಿತ ಸುಳ್ಳು ಆರೋಪ ಮಾಡಿದ್ದಾರೆ. ನಾನು ಈ ಹಿಂದೆ ಬಳ್ಳಾರಿಯಲ್ಲಿ ಸಹಾಯಕ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿದ್ದಾಗ ಜನಾರ್ದನ ರೆಡ್ಡಿ ಅವರಿಗೆ ಸಂಬಂಧಿಸಿದ ಕೆಲವು ಪ್ರಕರಣಗಳ ಕುರಿತು ಸಿಬಿಐಗೆ ದಾಖಲೆಗಳನ್ನು ಒದಗಿಸಿದ್ದೆ. ಅದಕ್ಕಾಗಿ ಈಗ ರೆಡ್ಡಿ ಅವರು ನನ್ನ ವಿರುದ್ಧ ಆಧಾರರಹಿತ ಆರೋಪ ಗಳನ್ನು ಮಾಡುತ್ತಿದ್ದಾರೆ ಎಂದು ತಿರುಗೇಟು ನೀಡಿದ್ದರು. ಬಳಿಕ ಪ್ರತಿಕ್ರಿ ಯಿಸಿದ್ದ ಜನಾರ್ದನ ರೆಡ್ಡಿ, ಸೆಂಥಿಲ್ ಮತ್ತೊಮ್ಮೆ ಸುಳ್ಳು ಹೇಳಿದ್ದಾರೆ. ಗಣಿಗಾರಿಕೆಗೆ ಸಂಬಂಧಿಸಿದ ಪ್ರಕರಣದಲ್ಲಿ ನನ್ನ ವಿರುದ್ಧದ ಪ್ರಕರಣಗಳು ಪ್ರಾರಂಭ ವಾದಾಗ ಕಾಂಗ್ರೆಸ್ ಸಂಸದರು ಸಹಾಯಕ ಆಯುಕ್ತರಾಗಿ ಎಂದಿಗೂ ಸೇವೆ ಸಲ್ಲಿಸಿರ ಲಿಲ್ಲ. ನನ್ನನ್ನು ಸೆಪ್ಟೆಂಬರ್ 5, 2011 ರಂದು ಬಂಧಿಸಲಾ ಯಿತು. ನನ್ನ ಬಂಧನದ ನಂತ ರ, ಅವರು ಬಳ್ಳಾರಿಯಲ್ಲಿ ಕರ್ತವ್ಯಕ್ಕೆ ಸೇರಿ ದರು. ನನ್ನ ಸೆಂಥಿಲ್ ನಡುವೆಯಾ ವುದೇ ಸಂಬಂಧವಿಲ್ಲ ಎಂದು ಹೇಳಿದ್ದರು.

ಮಹಿಳೆಗೆ ಅಸಭ್ಯ ಸನ್ನೆ ಮಾಡಿದವನ ಬಂಧನ



ಬೆಂಗಳೂರು: ರಸ್ತೆ ಬದಿ ಕ್ಯಾಬ್‌ಗೆ ಕಾಯುತ್ತಿದ್ದ ಮಹಿಳೆಯೊಂದಿಗೆ ಅಸಭ್ಯವಾಗಿ ವರ್ತಿಸಿ, ಲೈಂಗಿಕ ಕಿರುಕುಳ ನೀಡಿದ್ದ ಆರೋಪಿಯನ್ನು ರಾಮಮೂರ್ತಿ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಭಾನುವಾರ ರಾತ್ರಿ ಕಲ್ಕೆರೆಯ ಮಂಜುನಾಥ ನಗರದಲ್ಲಿ ಈ ಘಟನೆ ನಡೆದಿದೆ.

ಸ್ಕೂಟರ್‌ನಲ್ಲಿ ಬಂದಿದ್ದ ಆರೋಪಿ ವಿಜಯ್ ರಾಘವ್ (42), ಕ್ಯಾಬ್‌ಗಾಗಿ ಕಾಯುತ್ತಿದ್ದ ಮಹಿಳೆಯ ಬಳಿ ಅಸಭ್ಯವಾಗಿ ಮಾತನಾಡಿದ್ದಾನೆ. ನಾನು ಕ್ಯಾಬ್‌ಗಾಗಿ ಕಾಯುತ್ತಿದ್ದಾಗ ಸ್ಕೂಟರ್‌ನಲ್ಲಿ ಬಂದ ಆರೋಪಿ ಅಸಭ್ಯವಾಗಿ ವರ್ತಿಸಿದ. ಪೊಲೀಸರಿಗೆ ದೂರು ನೀಡುವುದಾಗಿ ಎಚ್ಚರಿಕೆ ನೀಡಿದಾಗ, ನಿಂದಿಸಲು ಪ್ರಾರಂಭಿಸಿದ. ಇಡೀ ಘಟನೆಯನ್ನು ನನ್ನ ಮೊಬೈಲ್ ಫೋನ್‌ನಲ್ಲಿ ವಿಡಿಯೊ ರೆಕಾರ್ಡ್ ಮಾಡಿಕೊಳ್ಳುತ್ತಿರುವುದನ್ನು ಗಮನಿಸಿದ ಆರೋಪಿ, ತಕ್ಷಣವೇ ತನ್ನ ಸ್ಕೂಟರ್‌ನಲ್ಲಿ ಸ್ಥಳದಿಂದ ಹೋಗಿದ್ದಾನೆ ಎಂದು ದೂರುದಾರ ಮಹಿಳೆ ದೂರಿನಲ್ಲಿ ತಿಳಿಸಿದ್ದಾರೆ. ಘಟನೆಯ ನಂತರ, ವಿಡಿಯೊ ಹಾಗೂ ಆರೋಪಿಯ ಸ್ಕೂಟರ್ ನಂಬರ್ ಸಹಿತ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದ ಮಹಿಳೆ, ಈ ನಡವಳಿಕೆ ಸಾಮಾನ್ಯವೆಂದು ಪರಿಗಣಿಸಬಾರದು. ಸಾರ್ವಜನಿಕ ಸ್ಥಳಗಳಲ್ಲಿ ಕಿರುಕುಳದ ವಿರುದ್ಧ ಧ್ವನಿ ಎತ್ತಬೇಕು. ಮೌನವು ಅಪರಾಧಿಗಳನ್ನು ಧೈರ್ಯ ಗೊಳಿಸುತ್ತದೆ. ಸಾರ್ವಜನಿಕ ಸ್ಥಳಗಳು ಎಲ್ಲರಿಗೂ ಸುರಕ್ಷಿತ ಮತ್ತು ಗೌರವಾನ್ವಿತವಾಗಿರಬೇಕು ಎಂದು ತಿಳಿಸಿದ್ದಾರೆ.

ಪೊಲೀಸರಿಗೆ ಟ್ಯಾಗ್ ಮಾಡಿ ಪೋಸ್ಟ್

ಆರೋಪಿಯ ವಿಡಿಯೊ ಮಾಡಿ ಪೋಸ್ಟ್ ಹಾಕಿದ್ದ ಮಹಿಳೆ ಬೆಂಗಳೂರು ನಗರ ಪೊಲೀಸರನ್ನು ಟ್ಯಾಗ್ ಮಾಡಿ ಆರೋಪಿಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದರು. ಸಾಮಾಜಿಕ ಜಾಲತಾಣದ ಪೋಸ್ಟ್‌ಗೆ ಪ್ರತಿಕ್ರಿಯಿಸಿದ್ದ ಪೊಲೀಸರು ಮಹಿಳೆಯಿಂದ ದೂರು ಪಡೆದಿದ್ದರು. ರಾಮಮೂರ್ತಿ ನಗರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಆರೋಪಿಯನ್ನು ಬಂಧಿಸಿದ್ದಾರೆ ಎಂದು ಬೆಂಗಳೂರು ಪೂರ್ವ ವಿಭಾಗದ ಡಿಸಿಪಿ ವಿಕ್ರಮ್ ಅಮಟೆ ಮಾಹಿತಿ ನೀಡಿದ್ದಾರೆ.

ಫಾರಿನ್ ಸೀರೆ, ವಜ್ರಾಭರಣ ಆಮಿಷದಿಂದ ದೋಖಾ

ಮಹಿಳೆಗೆ 1.75 ಕೋಟಿ ರು. ವಂಚನೆ

ಬೆಂಗಳೂರು: ಸಾಮಾಜಿಕ ಜಾಲತಾಣದಲ್ಲಿ ಪರಿಚಯವಾದ ವ್ಯಕ್ತಿಯೊಬ್ಬನ ಮಾತು ನಂಬಿ ಯಶವಂತಪುರದ ಮಹಿಳೆಯೊಬ್ಬರು ದುಬಾರಿ ಸೀರೆ ಹಾಗೂ ವಜ್ರಾ ಭರಣದ ಗಿಫ್ಟ್ ಆಸೆಗೆ ಬಿದ್ದು ಬರೋಬ್ಬರಿ 1.75 ಕೋಟಿ ರು. ಕಳೆದುಕೊಂಡಿರುವ ಘಟನೆ ಬೆಳಕಿಗೆ ಬಂದಿದೆ. ಘಟನೆ ಸಂಬಂಧ ಉತ್ತರ ವಿಭಾಗದ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಪೊಲೀಸರ ಮಾಹಿತಿ ಪ್ರಕಾರ, ಸಾಹಿಲ್ ಜುಗ್ಗಲ್ ಎಂಬಾತ ಫೇಸ್‌ಬುಕ್ ಮೂಲಕ ಮಹಿಳೆಗೆ ಪರಿಚಯವಾಗಿದ್ದಾನೆ. ಬಳಿಕ ಇಬ್ಬರೂ ಮೊಬೈಲ್ ನಂಬರ್ ಪಡೆದು ಸಂಪರ್ಕ ಬೆಳೆಸಿದ್ದಾರೆ, ಇಬ್ಬರ ನಡುವೆ ಆತ್ಮೀಯತೆಯೂ ಬೆಳೆದಿದೆ. ಈ ವೇಳೆ ತಾನು ಯುನೈಟೆಡ್ ಕಿಂಗ್ಡಮ್‌ನಲ್ಲಿ ಕೆಲಸ ಮಾಡುತ್ತಿರುವುದಾಗಿ ಹೇಳಿಕೊಂಡಿದ್ದ ಸಾಹಿಲ್, ಮಹಿಳೆಗೆ ವಿದೇಶದಿಂದ ದುಬಾರಿ ಸೀರೆ, ರತ್ನ ಹಾಗೂ ವಜ್ರಾಭರಣಗಳನ್ನ ಗಿಫ್ಟ್ ಆಗಿ ಕಳುಹಿಸುತ್ತಿರುವುದಾಗಿ ನಂಬಿಸಿದ್ದ.

ಕೆಲ ದಿನಗಳ ನಂತರ ಮಹಿಳೆಗೆ ಕರೆ ಮಾಡಿದ ಸಾಹಿಲ್, ನನ್ನ ಬಳಿ ಭಾರತೀಯ ಕರೆನ್ಸಿ ಇಲ್ಲ. ಕಸ್ಟಮ್ಸ್ ಶುಲ್ಕ ಪಾವತಿಸಲು ತಾತ್ಕಾಲಿಕವಾಗಿ 40 ಲಕ್ಷ ರು. ನೀಡಿ. ನಾನು ಭಾರತಕ್ಕೆ ಬಂದ ಬಳಿಕ ಹಣ ಹಿಂದಿರುಗಿಸುತ್ತೇನೆ ಎಂದು ಮನವೊಲಿಸಿದ್ದಾನೆ. ಹಣ ಯಾರಿಗೆ ನೀಡಬೇಕು ಎಂದು ಮಹಿಳೆ ಕೇಳಿದಾಗ, ಅರ್ಧಕ್ಕೆ ಹರಿದಿದ್ದ 10 ನೋಟಿನ ಫೋಟೋವನ್ನು ಕಳುಹಿಸಿ, ಅದೇ ರೀತಿಯ ನೋಟು ತೋರಿಸುವ ವ್ಯಕ್ತಿಗೆ ಹಣ ನೀಡುವಂತೆ ಸೂಚಿಸಿ ದ್ದ. ಸಾಹಿಲ್ ಹೇಳಿದಂತೆ ಹೋಟೆಲ್‌ಗೆ ತೆರಳಿದ ಮಹಿಳೆ, ಹರಿದ ನೋಟು ತೋರಿಸಿದ ವ್ಯಕ್ತಿಗೆ 40 ಲಕ್ಷ ರು. ಕೊಟ್ಟಿದ್ದಾಳೆ.

ತಲುಪದ ಗಿಫ್ಟ್; ವಂಚನೆ ಬೆಳಕಿಗೆ: ಇದಾದ ಬಳಿಕ ತಾನು ಕಸ್ಟಮ್ಸ್ ಅಧಿಕಾರಿ ಎಂದು ಪರಿಚಯಿಸಿಕೊಂಡ ಮತ್ತೊಬ್ಬ ವ್ಯಕ್ತಿ ಕರೆ ಮಾಡಿ, ಗಿಫ್ಟ್‌ನಲ್ಲಿರುವ ವಜ್ರಾಭರಣಗಳ ಮೌಲ್ಯ ಹೆಚ್ಚಿರುವುದರಿಂದ ವಿವಿಧ ಶುಲ್ಕ ಪಾವತಿಸಬೇ ಕಾಗುತ್ತದೆ ಎಂದು ಹೇಳಿ ಮತ್ತೆ ಮತ್ತೆ ಹಣ ಕೇಳಿದ್ದಾನೆ. ಹೀಗೆ ಮಹಿಳೆಯನ್ನು ನಂಬಿಸಿ ತೆರಿಗೆ, ಇತರ ಕಾರಣ ಗಳನ್ನು ನೀಡಿ ಹಂತ ಹಂತವಾಗಿ ಒಟ್ಟು ಒಂದು ಮುಕ್ಕಾಲು ಕೋಟಿ ರು. ಪಡೆದು ವಂಚನೆ ಎಸಗಿದ್ದಾರೆ ಎಂದು ಆಕೆ ಆರೋಪಿಸಿದ್ದಾರೆ. ಬಹಳ ದಿನಗಳಾದರೂ ಗಿಫ್ಟ್ ತಲುಪದ ಹಿನ್ನೆಲೆಯಲ್ಲಿ ಮಹಿಳೆಗೆ ಅನುಮಾನ ಬಂದು ಪರಿಶೀಲನೆ ನಡೆಸಿದಾಗ ತಾನು ಮೋಸ ಹೋಗಿರುವುದು ಬೆಳಕಿಗೆ ಬಂದಿದೆ. ಬಳಿಕ ಅವರು ಉತ್ತರ ವಿಭಾಗದ ಸೈಬರ್ ಕ್ರೈಂ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಗೃಹ ಇಲಾಖೆಗೆ ಹೈಕೋರ್ಟ್ ತರಾಟೆ

ಬೆಂಗಳೂರು: ಅಕ್ರಮ ಬಾಂಗ್ಲಾ ವಲಸಿಗರ ಮಾಹಿತಿ ನೀಡಿದ್ದ ವ್ಯಕ್ತಿಯನ್ನು ಬಂಧಿಸಿದ್ದ ಬೆಳ್ಳಂದೂರು ಪೊಲೀಸರ ಕ್ರಮಕ್ಕೆ ಹೈಕೋರ್ಟ್ ಅಸಮಾಧಾನ ಹೊರಹಾಕಿದೆ.

ನಾಗೇಂದ್ರ ಎಂಬುವರು ಜುಲೈ 22ರ ರಾತ್ರಿ 11.30ಕ್ಕೆ ಅಕ್ರಮ ಬಾಂಗ್ಲಾ ವಲಸಿಗರ ವಿರುದ್ಧ ದೂರು ನೀಡಿದ್ದರು. ಬಳಿಕ ಅಂದೇ 11.45ಕ್ಕೆ ದೂರು ನೀಡಿದ್ದ ನಾಗೇಂದ್ರ ವಿರುದ್ಧವೇ ಪ್ರಕರಣ ದಾಖಲಿಸಿ ಬಂಧಿಸಲಾಗಿತ್ತು. ಈ ಪ್ರಕರಣ ರದ್ದುಕೋರಿ ನಾಗೇಂದ್ರ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ, ಬೆಳ್ಳಂದೂರು ಪೊಲೀಸರ ಈ ನಡೆಗೆ ಅಸಮಾಧಾನಗೊಂಡಿದೆ. ಇದು ಕಾನೂನು ಪ್ರಕ್ರಿಯೆಯ ಸಂಪೂರ್ಣ ದುರುಪಯೋಗ. ಗೃಹ ಇಲಾಖೆ ಏನು ಮಾಡುತ್ತಿದೆ. ದೇಶದ ಭದ್ರತೆಗೇ ಬೆದರಿಕೆಯಿದ್ದರೂ ವಲಸಿಗರನ್ನು ಬೆಂಬಲಿಸುತ್ತಿದ್ದೀರಾ ಎಂದು ಪೊಲೀಸ್ ಇಲಾಖೆಯನ್ನು ತರಾಟೆಗೆ ತೆಗೆದುಕೊಂಡು, ಅರ್ಜಿದಾರರ ವಿರುದ್ಧದ ಪ್ರಕರಣಕ್ಕೆ ತಡೆಯಾಜ್ಞೆ ನೀಡಿದೆ.

ತೇಜಸ್ ನೆಟ್‌ವರ್ಕ್ಸ್ ಲಿಮಿಟೆಡ್
TEJAS® NETWORKS
ನೋಂದಾಯಿತ ಕಚೇರಿ: ಜೆ.ಪಿ. ಸಾಫ್ಟ್‌ವೇರ್ ಪಾರ್ಕ್, ಪ್ಲಾಟ್ ನಂ. 25, ಸರ್ವೆ ನಂ. 13, 14, 17 & 18, ಕೋನಪ್ಪನ ಅಗ್ರಹಾರ ವಿಲೇಜ್, ಬೇಗೂರು ಹೋಬಳಿ, ಬೆಂಗಳೂರು-560 100, ಕರ್ನಾಟಕ, ಭಾರತ.
ಕಾರ್ಪೋರೇಟ್ ಐಡೆಂಟಿಟಿ ನಂಬರ್: L72900KA2000PLC026980
ದೂರವಾಣಿ: +91 80 4179 4600 ಫ್ಯಾಕ್ಸ್: +91 80 2852 0201
ಇ-ಮೇಲ್: corporate@tejasnetworks.com ವೆಬ್‌ಸೈಟ್: www.tejasnetworks.com

ಜೂನ್ 30, 2026 ಕ್ಕೆ ಅಂತ್ಯಗೊಂಡ ತ್ರೈಮಾಸಿಕದ ಅಪರಿಶೋಧಿತ ಹಣಕಾಸು ಫಲಿತಾಂಶಗಳು

ಜುಲೈ 27, 2026 ರಂದು ನಡೆದ ಕಂಪೆನಿಯ ನಿರ್ದೇಶಕರ ಮಂಡಳಿಯ ಸಭೆಯಲ್ಲಿ ಜೂನ್ 30, 2026 ಕ್ಕೆ ಅಂತ್ಯಗೊಂಡ ತ್ರೈಮಾಸಿಕದ ಅಪರಿಶೋಧಿತ ಹಣಕಾಸು ಫಲಿತಾಂಶಗಳನ್ನು ಅನುಮೋದಿಸಿದೆ.
ಫಲಿತಾಂಶಗಳನ್ನು ಲೆಕ್ಕಪರಿಶೋಧಕರ ವರದಿಯೊಂದಿಗೆ ಕಂಪೆನಿಯ ವೆಬ್‌ಸೈಟ್ https://www.tejasnetworks.com/quarterly-financial-results/ ನಲ್ಲಿ ಅಪ್‌ಲೋಡ್ ಮಾಡಲಾಗಿದೆ ಮತ್ತು ಕ್ಯೂಆರ್ ಕೋಡ್ ಅನ್ನು ಸ್ಕ್ಯಾನ್ ಮಾಡುವ ಮೂಲಕ ಪರಿಶೀಲಿಸಬಹುದು.

ಸ್ಥಳ : ಬೆಂಗಳೂರು
ದಿನಾಂಕ : ಜುಲೈ 27, 2026

ಮಂಡಳಿಯ ಆದೇಶದ ಮೇರೆಗೆ
ತೇಜಸ್ ನೆಟ್‌ವರ್ಕ್ಸ್ ಲಿಮಿಟೆಡ್ ಪರವಾಗಿ
ಸಹಿ/-
ಅನಂತ ಮೂರ್ತಿ ಎನ್.
ಕಂಪೆನಿ ಕಾರ್ಯದರ್ಶಿ ಮತ್ತು ಕಂಪ್ಲೆಯನ್ಸ್ ಅಧಿಕಾರಿ
ICSI ಸದಸ್ಯತ್ವ ಸಂಖ್ಯೆ: 17134

ಗಮನಿಸಿ: ಮೇಲಿನ ಸೂಚನೆಯು ಸೆಬಿ (ಪಟ್ಟಿ ಮಾಡುವ ಬಾಧ್ಯತೆಗಳು ಮತ್ತು ಬಹಿರಂಗಪಡಿಸುವಿಕೆಯ ಅವಶ್ಯಕತೆಗಳು) ನಿಯಮಗಳು, 2015ರ ನಿಯಮಾವಳಿ 33ರ ಜೊತೆಗೆ ಓದಲಾದ ನಿಯಮಾವಳಿ 47(1) ರ ಪ್ರಕಾರವಾಗಿದೆ.

happiest minds
AI FIRST. AGILE ALWAYS.
ಹ್ಯಾಪಿಯೆಸ್ಟ್ ಮೈಂಡ್ಸ್ ಟೆಕ್ನಾಲಜಿಸ್ ಲಿಮಿಟೆಡ್
CIN : L72900KA2011PLC057931
ನೋಂದಾಯಿತ ಕಛೇರಿ: 53/1-4, ಹೊಸೂರು ಮುಖ್ಯ ರಸ್ತೆ, ಮಡಿವಾಳ, ಬೆಂಗಳೂರು - 560 068, ಕರ್ನಾಟಕ, ಭಾರತ
Website: www.happiestminds.com, Email: IR@happiestminds.com, Tel: +91 80 6196 0300

ಜೂನ್ 30, 2026 ಕ್ಕೆ ಕೊನೆಗೊಂಡ ತ್ರೈಮಾಸಿಕದ ಅಪರಿಶೋಧಿತ ಹಣಕಾಸು ಆರ್ಥಿಕ ಫಲಿತಾಂಶಗಳು

ಕಂಪನಿಯ ನಿರ್ದೇಶಕರ ಮಂಡಳಿಯು ಜುಲೈ 27, 2026 ರಂದು ನಡೆಸಿದ ಸಭೆಯಲ್ಲಿ, ಭಾರತೀಯ ಲೆಕ್ಕಪತ್ರ ಮಾನದಂಡಗಳಿಗೆ ಅನುಗುಣವಾಗಿ ಸಿದ್ಧಪಡಿಸಲಾದ ಜೂನ್ 30, 2026 ಕ್ಕೆ ಕೊನೆಗೊಂಡ ತ್ರೈಮಾಸಿಕದ ಕಂಪನಿಯ ಅಪರಿಶೋಧಿತ ಹಣಕಾಸು ಆರ್ಥಿಕ ಫಲಿತಾಂಶಗಳನ್ನು (ಸ್ವತಂತ್ರ ಮತ್ತು ಕ್ರೋಢೀಕೃತ ಎರಡನ್ನೂ) ಅನುಮೋದಿಸಿದೆ. ಹಣಕಾಸಿನ ಫಲಿತಾಂಶಗಳ ಸಂಪೂರ್ಣ ಪಠ್ಯ, ಕಂಪನಿಯ ಷೇರುಗಳು ಪಟ್ಟಿಯಾಗಿರುವ ಸ್ಟಾಕ್ ಎಕ್ಸ್-ಚೇಂಜ್ ಗಳ www.bseindia.com ಮತ್ತು www.nseindia.com ವೆಬ್‌ಸೈಟ್‌ಗಳಲ್ಲ ಮತ್ತು ಕಂಪನಿಯ www.happiestminds.com ವೆಬ್‌ಸೈಟ್ ನಲ್ಲ ಲಭ್ಯವಿರುತ್ತವೆ. ಇಲ್ಲ ಕೆಳಗೆ ನೀಡಿರುವ QR ಕೋಡನ್ನು ಸ್ಕ್ಯಾನ್ ಮಾಡಿ ಅವುಗಳನ್ನು ಪಡೆದುಕೊಳ್ಳಬಹುದು.

ಸ್ಥಳ: ಬೆಂಗಳೂರು, ಭಾರತ
ದಿನಾಂಕ: ಜುಲೈ 27, 2026

ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಕಂಪನಿಯ ವೆಬ್‌ಸೈಟಿನಲ್ಲರುವ ಫಲಿತಾಂಶಗಳನ್ನು ನೋಡಬಹುದು.

ಹ್ಯಾಪಿಯೆಸ್ಟ್ ಮೈಂಡ್ಸ್ ಟೆಕ್ನಾಲಜಿಸ್ ಲಿಮಿಟೆಡ್‌ಗಾಗಿ
ಸಹಿ/-
ಮ್ಯಾನೇಜಿಂಗ್ ಡೈರೆಕ್ಟರ್

ದೇವನೂರು ಮಹಾದೇವ, ಗುಹಾ ಸಲ್ಲಿಸಿದ್ದ ಪಿಐಎಲ್ ವಜಾಗೊಳಿಸಿದ ಹೈಕೋರ್ಟ್

ಎಸ್‌ಐಆರ್ ವಿಸ್ತರಣೆಗೆ ಕೋರಿದ್ದ ಅರ್ಜಿ ವಜಾ

ಬೆಂಗಳೂರು: ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅವಧಿಯನ್ನು ಒಂದರಿಂದ ಮೂರು ತಿಂಗಳವರೆಗೆ ವಿಸ್ತರಣೆ ಕೋರಿ ಸಾಹಿತಿ ದೇವನೂರು ಮಹಾದೇವ ಹಾಗೂ ಇತಿಹಾಸ ತಜ್ಞ ರಾಮಚಂದ್ರ ಗುಹಾ ಸೇರಿದಂತೆ ಇನ್ನಿತರರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.

ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ಕೆ.ಎಸ್.ಹೇಮಲತಾ ಅವರಿದ್ದ ವಿಭಾಗೀಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು. ಎಸ್‌ಐಆರ್ ಅವಧಿ ವಿಸ್ತರಣೆ ಕೇಂದ್ರ ಚುನಾವಣೆ ಆಯೋಗಕ್ಕೆ ಬಿಟ್ಟ ವಿಚಾರ. ಆಯೋಗದಲ್ಲಿ ತಜ್ಞರ ತಂಡ ಕೆಲಸ ಮಾಡುತ್ತಿದೆ. ಪರಿಹಾರ ಕ್ರಮಗಳನ್ನೂ ಆಯೋಗವೇ ಕೈಗೊಳ್ಳಬೇಕು. ಅಗತ್ಯವಿದ್ದರೆ ಅವರು ಅದನ್ನು ಮಾಡಲಿದ್ದಾರೆ ಎಂದು ತಿಳಿಸಿ ಅರ್ಜಿಯನ್ನು ವಜಾಗೊಳಿಸಿತು.

ಆಯೋಗ ನಿಮ್ಮ ಕೋರಿಕೆಗೆ ನಿರಾಕರಿಸಿದರೆ ನೀವು ಕೋರ್ಟ್ ಅರ್ಜಿ ಸಲ್ಲಿಸಬಹುದು. ಈ ಬಗ್ಗೆ ಚುನಾವಣಾ ಆಯೋಗಕ್ಕೆ ಅರ್ಜಿ ಸಲ್ಲಿಸಲು ಹೈಕೋರ್ಟ್ ಸೂಚನೆ ನೀಡಿದೆ. ಅರ್ಜಿಯಲ್ಲಿ ಎತ್ತಿರುವ ಎಸ್‌ಐಆರ್ ಸಂಬಂಧಿತ ವಿಚಾರಗಳು ಸುಪ್ರೀಂಕೋರ್ಟ್ ಪರಿಗಣನೆಯಲ್ಲಿವೆ. ಹೀಗಾಗಿ, ಈ ಹಂತದಲ್ಲಿ ಹಾಲಿ ಅರ್ಜಿಯನ್ನು ನ್ಯಾಯಾಲಯವು ಪರಿಗಣಿಸುವುದು ಸರಿಯಲ್ಲ ಎಂಬ ಅಂಶಗಳನ್ನು ಉಲ್ಲೇಖಿಸಿ ನ್ಯಾಯಾಲಯವು ಪಿಐಎಲ್ ಇತ್ಯರ್ಥಪಡಿಸಿದೆ.

ಸಚಿವ ಸಂಪುಟವು ಕೆಲವು ಸಲಹೆ, ಶಿಫಾರಸುಗಳನ್ನು ಆಯೋಗಕ್ಕೆ ಮಾಡಿದೆ. ಇದುವರೆಗೆ ಆಯೋಗ ಪ್ರತಿಕ್ರಿಯೆ ನೀಡಿಲ್ಲ. ಜನರ ಮೂಲಭೂತ ಹಕ್ಕು ರಕ್ಷಿಸಬೇಕು ಎಂದು ಕೋರಲಾಗಿದೆ. ಕಾಲಮಿತಿಯ ಅನುಗುಣವಾಗಿ ಹೋಗದೆ ಜನರ ಅನುಕೂಲಕ್ಕೆ ತಕ್ಕಂತೆ ಕ್ರಮಕೈಗೊಳ್ಳುವಂತೆ ಆಯೋಗಕ್ಕೆ ಮನವಿ ಮಾಡಲಾಗಿದೆ.

-ಶಶಿಕಿರಣ್ ಶೆಟ್ಟಿ
ರಾಜ್ಯ ಅಡ್ವೊಕೇಟ್ ಜನರಲ್

ಅರ್ಜಿಯಲ್ಲಿ ಎಸ್‌ಐಆರ್ ನಡೆಸುವುದಕ್ಕೆ ಅಳವಡಿಸಿಕೊಂಡಿರುವ ಪ್ರಕ್ರಿಯೆಗಳನ್ನು ಪ್ರಶ್ನಿಸಲಾಗಿದೆ. ಆಯೋಗವು ಎಸ್‌ಐಆರ್ ನಡೆಸಲು ವಿಶೇಷ ಸಂಸ್ಥೆಯಾಗಿದ್ದು, ಪ್ರಕ್ರಿಯೆಯಲ್ಲಿ ಎದುರಾಗುವ ಸಮಸ್ಯೆಯನ್ನು ನಿವಾರಿಸಲು ಬದ್ಧವಾಗಿಲ್ಲ ಎಂದು ಹೇಳಲು ಯಾವುದೇ ಕಾರಣವಿಲ್ಲ. ಎಸ್‌ಐಆರ್ ಪೂರ್ಣಗೊಳಿಸಲು ನಿಗದಿಪಡಿಸಿರುವ ಕಾಲಮಿತಿಯ ವಿಚಾರವು ಆಯೋಗದ ವಿಶೇಷ ವ್ಯಾಪ್ತಿಗೆ ಒಳಪಟ್ಟಿದ್ದು, ಈ ವಿಚಾರವನ್ನು ಈ ಹಂತದಲ್ಲಿ ಈ ನ್ಯಾಯಾಲಯ ನಿರ್ಧರಿಸಲಾಗದು ಎಂದು ಕೋರ್ಟ್ ಸ್ಪಷ್ಟಪಡಿಸಿದೆ.

ಇದಕ್ಕೂ ಮುನ್ನ ಅರ್ಜಿದಾರರ ಪರವಾಗಿ ಹಾಜರಾಗಿದ್ದ ಹಿರಿಯ ವಕೀಲ ವಿಕ್ರಮ್ ಹುಯಿಲಗೋಳ ಅವರು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗಿಯಾಗಿರುವ ಬಿಎಲ್‌ಒಗಳಿಗೆ 10 ದಿನ ಮಾತ್ರ ತರಬೇತಿ ನೀಡಲಾಗಿದೆ. ಅಂಗನವಾಡಿ ಕೆಲಸಗಾರರು, ಶಿಕ್ಷಕರನ್ನು ಈ ಕೆಲಸಕ್ಕೆ ನಿಯೋಜಿಸಲಾಗಿದೆ. ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದವರಿಗೆ ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಆನಂತರ ಒಂದು ತಿಂಗಳಲ್ಲಿ ತೀರ್ಮಾನ ಕೈಗೊಳ್ಳಲಾಗುತ್ತದೆ. ಬಿಹಾರದಲ್ಲಿ ಇದೇ ನೀತಿ ಪಾಲಿಸಲಾಗಿತ್ತು. ಬಿಹಾರದಲ್ಲಿ ಚುನಾವಣೆ ಇತ್ತು. ಆದರೆ, ಕರ್ನಾಟಕದಲ್ಲಿ 2028ರಲ್ಲಿ ಚುನಾವಣೆ ನಡೆಯುತ್ತದೆ. ಹೀಗಾಗಿ, ಇಲ್ಲಿ ಕಾಲಾವಕಾಶ ನೀಡಬಹುದು ಎಂದರು.

ಸಮಸ್ಯೆಯಾದರೆ ಅಗತ್ಯ ಕ್ರಮ: ಕೇಂದ್ರ ಸರಕಾರ

ಕೇಂದ್ರ ಚುನಾವಣಾ ಆಯೋಗದ ಪರ ವಕೀಲ ಶರತ್ ದೊಡ್ವಾಡ್, ಅರ್ಜಿದಾರರು ಕರಡು ಪಟ್ಟಿ ಪ್ರಕಟವಾಗುವುದರೊಳಗೆ ಎಲ್ಲವನ್ನು ಮಾಡಬೇಕು ಎನ್ನುತ್ತಿದ್ದಾರೆ. ಒಂದೊಮ್ಮೆ ಅಗತ್ಯ ಎನಿಸಿದರೆ ಆಯೋಗವು ಕಾಲಮಿತಿ ವಿಸ್ತರಿಸಲಿದೆ. ಕಾಲಮಿತಿ ನಿಗದಿಪಡಿಸಿರುವುದಕ್ಕೆ ಸಂಬಂಧಿಸಿದಂತೆ ಇಸಿಐ ಎಚ್ಚರಿಕೆ ವಹಿಸಿದ್ದು, ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಳಿಸಲು ಸಮಸ್ಯೆಯಾದರೆ ಆಯೋಗವು ಅಗತ್ಯ ಕ್ರಮ ಕೈಗೊಳ್ಳಲಿದೆ. ಕರಡು ಮತಪಟ್ಟಿ ಬಿಡುಗಡೆ ಮಾಡುವುದಕ್ಕೂ ಮುನ್ನ ಹೆಸರು ಇಲ್ಲದವರಿಗೆ ನೋಟಿಸ್ ಜಾರಿಗೊಳಿಸಬೇಕು ಎಂಬು ದು ಸರಿಯಲ್ಲ. ಕರಡು ಪರಿಷ್ಕೃತ ಮತಪಟ್ಟಿ ಬಿಡುಗಡೆ ಯಾದ ಬಳಿಕ ನೋಟಿಸ್ ಜಾರಿಗೊಳಿಸಲಾಗುವುದು ಎಂದರು.

ಪಾನ್ ಮಸಾಲಾ ಮೇಲಿನ ಸೆಸ್ ರದ್ದು

ಕೇಂದ್ರ ಸರಕಾರದ ಆದೇಶ ಅನೂರ್ಜಿತಗೊಳಿಸಿದ ಹೈಕೋರ್ಟ್

ಬೆಂಗಳೂರು: ಕೇಂದ್ರ ಸರಕಾರ ಪಾನ್ ಮಸಾಲಾ ಮೇಲೆ ವಿಧಿಸಿರುವ ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ರದ್ದುಪಡಿಸಿ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಪಾನ್ ಮಸಾಲಾ ಮೇಲೆ ಸೆಸ್ ವಿಧಿಸುತ್ತಿರುವುದನ್ನು ಪ್ರಶ್ನಿಸಿ ಪಾನ್ ಮಸಾಲಾ ತಯಾರಕರು ಸಲ್ಲಿಸಿದ್ದ ಅರ್ಜಿಯ ಮೇಲಿನ ಕಾಯ್ದಿಟ್ಟ ತೀರ್ಪು ಪ್ರಕಟಿಸಿರುವ ಹೈಕೋರ್ಟ್, ಕೇಂದ್ರ ಸರಕಾರದ ಆದೇಶವನ್ನು ಅನೂರ್ಜಿತಗೊಳಿಸಿತು. ಪಾನ್ ಮಸಾಲಾ ತಯಾರಕರಾದ ಧಾರಿವಾಲ್ ಇಂಡಸ್ಟ್ರೀಸ್ ಮತ್ತಿತರರು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆಯನ್ನು ಪೂರ್ಣಗೊಳಿಸಿದ್ದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಸೋಮವಾರ ತೀರ್ಪು ನೀಡಿತು.

ಪಾನ್ ಮಸಾಲಾ ಮೇಲೆ ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ವಿಧಿಸುವ ಕೇಂದ್ರದ ಕ್ರಮ ಏಕಪಕ್ಷೀಯವಾಗಿದೆ ಎಂದಿರುವ ನ್ಯಾಯಾಲಯ, ಇದೇ ವೇಳೆ ಸಂಸತ್ತಿಗೆ ಸೆಸ್ ವಿಧಿಸಲು ಇರುವ ಅಧಿಕಾರವನ್ನು ಎತ್ತಿಹಿಡಿದಿದೆ. ಕೇಂದ್ರ ಸರಕಾರದ 2006ರ ಆರೋಗ್ಯ ಭದ್ರತಾ ರಾಷ್ಟ್ರೀಯ ಭದ್ರತಾ ಸೆಸ್ ಕಾಯ್ದೆಯ ಸಿಂಧುತ್ವವನ್ನು ಪಾನ್ ಮಸಾಲಾ ತಯಾರಕರು ಪ್ರಶ್ನಿಸಿದ್ದರು. ಸೆಸ್ ವಿಧಿಸುವ ಸಂಸತ್ತಿನ ಅಧಿಕಾರವನ್ನು ಸಮರ್ಥಿಸಿರುವ ಹೈಕೋರ್ಟ್, ನಿಜವಾದ ಉತ್ಪಾದನೆಯ ಬದಲಿಗೆ ಊಹಿಸಿದ ಉತ್ಪಾದನೆಯ ಆಧಾರದ ಮೇಲೆ ಪಾನ್ ಮಸಾಲಾ ಉತ್ಪನ್ನಗಳ ಮೇಲೆ ಸೆಸ್ ವಿಧಿಸುವುದು ಅನಿಯಂತ್ರಿತ ಮತ್ತು ಸಂವಿಧಾನದ 14ನೇ ವಿಧಿಯನ್ನು ಉಲ್ಲಂಘಿಸುತ್ತದೆ ಎಂದಿದೆ.

ಅಸಾಂವಿಧಾನಿಕ ಸೆಸ್: ಪೀಠ

ಕಡಿಮೆ ಉತ್ಪಾದನಾ ಸಾಮರ್ಥ್ಯ ಹೊಂದಿರುವ ಕಂಪನಿಗಳು ಹೆಚ್ಚಿನ ಉತ್ಪಾದನಾ ಸಾಮರ್ಥ್ಯ ಹೊಂದಿ ರುವ ಯಂತ್ರಗಳನ್ನು ಬಳಸುವ ಕಂಪನಿಗಳಂತೆಯೇ ಸೆಸ್ ಪಾವತಿಸಬೇಕಾಗುತ್ತದೆ. ಇದು ಅನಿಯಂತ್ರಿತ ವರ್ಗೀಕರಣಕ್ಕೆ ಕಾರಣವಾಗುತ್ತದೆ. ಆದ್ದರಿಂದ, ನಿಜವಾದ ಉತ್ಪಾದನೆಯ ಬದಲು, ಪಾನ್ ಮಸಾಲಾ ಪೌಚ್-ಪ್ಯಾಕಿಂಗ್ ಯಂತ್ರಗಳ ಸಂಭಾವ್ಯ ಉತ್ಪಾದನೆಯ ಆಧಾರದ ಮೇಲೆ ಸೆಸ್ ವಿಧಿಸುವುದು ಅಸಾಂವಿಧಾನಿಕ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.